ಶ್ರೀ ಎಂ ಮಹಾದೇವ್ (ಪಶು ಸಂಗೋಪನೆ ಹಾಗೂ ಸಕ್ಕರೆ ಸಚಿವರು)

ಅ) ರಾಜ್ಯದಲ್ಲಿರುವ ಸಹಕಾರಿ ರಂಗದ ಸಕ್ಕರೆ ಕಾರ್ಖಾನೆಗಳ ಸಮಸ್ಯೆಗಳನ್ನು ಕುರಿತು ಅಧ್ಯಯನ ಮಾಡಿ ಪರಿಹಾರ ಸೂಚಿಸಿ ವರದಿ ನೀಡುವಂತೆ ಮಾನ್ಯ ಕೃಷಿ ಸಚಿವರ ಅಧ್ಯಕ್ಷತೆಯಲ್ಲಿ ಆದೇಶ ಸಂಖ್ಯೆ ಡಿಇಎ (ಸಿಎಸ್‌ಸಿ) 1 2003 ದಿನಾಂಕ 09–01–2003 ರನ್ವಯ ಸರ್ಕಾರವು ಸಚಿವ ಸಂಪುಟದ ಉಪ ಸಮಿತಿಯನ್ನು ರಚಿಸಲಾಗಿದ್ದು, ಈ ಸಮಿತಿಯು ಶಿಫಾರಸ್ಸುಗಳನ್ನು ಸರ್ಕಾರಕ್ಕೆ ಸಲ್ಲಿಸಿದ್ದು ಇನ್ನೂ ಅಂತಿಮ ತೀರ್ಮಾನವಾಗಿರುವುದಿಲ್ಲ

ಆ) ಸರ್ಕಾರದ ಅಂತಿಮ ತೀರ್ಮಾನದ ಪ್ರಕಾರ ಮುಂದಿನ ಕ್ರಮ ವಹಿಸಲಾಗುವುದು

ಇ) ಸರ್ಕಾರ್ದ ಅಂತಿಮ ತೀರ್ಮಾನದ ಪ್ರಕಾರ ಸೂಕ್ತ ಕ್ರಮ ವಹಿಸಲಾಗುವುದು

ವೀರಶೈವ ಪಂಚಮಸಾಲ ಸಮಾಜವನ್ನು ಹಿಂದುಳಿದ ವರ್ಗಕ್ಕೆ ಸೆರಿಸುವುದು

242 (46) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ವೀರಶೈವ ಪಂಚಮ ಸಾಲಿನ ಸಮಾಜವನ್ನು ಹಿಂದುಳಿದ ವರ್ಗಕ್ಕೆ ಸೇರಿಸಬೇಕೆಂದು ಮನವಿಗಳು ಸರ್ಕಾರಕ್ಕೆ ಬಂದಿವೆಯೇ

ಆ) ಹಾಗಿದ್ದಲ್ಲಿ, ಈ ಸಮಾಜವನ್ನು ಹಿಂದುಳಿದ ವರ್ಗಕ್ಕೆ ಸೇರಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗುವುದು,

ಇ) ಈ ಸಮಾಜದ ಜನರು ಆರ್ಥಿಕವಾಗಿ ಹಾಗೂ ಸಾಮಾಜಿಕವಾಗಿ ಉಳಿದ ಸಮಾಜದವರಿಗಿಂತಲೂ ಹಿಂದುಳಿದವರಾಗಿದ್ದು, ಇವರನ್ನು ಕೂಡಲೇ ಹಿಂದುಳಿದ ವರ್ಗಕ್ಕೆ ಸೇರಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಲು ಕ್ರಮ ಕೈಗೊಳ್ಳಲಾಗುವುದೇ

ಈ) ರಾಜ್ಯದಲ್ಲಿ ಎಷ್ಟು ಜನ ವೀರಶೈವ ಪಂಚಮಸಾಲಿ ಸಮಾಜದವರು ಇರುತ್ತಾರೆ?

ಶ್ರೀ ಎ ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು)

ಅ) ಹೌದು ಸರ್ಕಾರದ ಗಮನಕ್ಕೆ ಬಂದಿರುತ್ತದೆ

ಆ) ಈ ಮನವಿಗಳನ್ನು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಪರಿಶೀಲಿಸುತ್ತಿದ್ದು, ಆಯೋಗದಿಂದ ವರದಿ ಬಂದ ನಂತರ ಸರ್ಕಾರವು ಪರಿಶೀಲಿಸಿ ಸೂಕ್ತ ನಿರ್ಣಯವನ್ನು ತೆಗೆದುಕೊಳ್ಳುವುದು

ಇ) ಈ ಬಗ್ಗೆ ಮನವಿಗಳು ಬಂದಲ್ಲಿ ಸರ್ಕಾರವು ಅದನ್ನು ಪರಿಶೀಲಿಸುತ್ತದೆ

ಈ) ಜಸ್ಟೀಸ್ ಓ ಚಿನ್ನಪ್ಪರೆಡ್ಡಿಯವರ ವರದಿಯನ್ವಯ ರಾಜ್ಯದಲ್ಲಿ 1988ನೇ ಸಾಲಿನಲ್ಲಿ 67,62, 703 ಲಿಂಗಾಯಿತರ ಜನಸಂಖ್ಯೆ ಲಭ್ಯವಿರುತ್ತದೆ ಆದರೆ ವೀರಶೈವ ಪಂಚಮಸಾಲಿ ಸಮಾಜದ ಪ್ರತ್ಯೇಕ ಜನಗಣತಿ ಮಾಡದೇ ಇರುವುದರಿಂದ ಇವರ ಸಂಖ್ಯೆ ಸರ್ಕಾರದಲ್ಲಿ ಲಭ್ಯವಿರುವುದಿಲ್ಲ

ರಾಜ್ಯದಲ್ಲಿ ರೇಷ್ಮೆ ಕಾರ್ಖಾನೆಗಳ ಪುನಶ್ಚೇತನ

243 (541) ಶ್ರೀ ಎ ಆರ್ ಕೃಷ್ಣಮೂರ್ತಿ (ಸಂತೇಮರಳ್ಳಿ) ಮಾನ್ಯ ರೇಷ್ಮೆ, ಜವಳಿ ಹಾಗೂ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಮತ್ತು ನಾಗರೀಕ ವಿಮಾನಯಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?